ಸಾಕ್ಷಿಯನ್ನು ದಿಃ20.09.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ ವಾದಿಗಳ ಪರ ಶ್ರೀಮತಿ ಹೆಚ್ ಬಿ ಆರ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳೆಲ್ಲವೂ ಸತ್ಯವಾಗಿದ್ದು ಅದಕ್ಕೆ ನಾನು ಸಹಿ ಮಾಡಿದ್ದೇನೆ.

ಸಾಕ್ಷಿಯು ನೊಂದಾಯಿತು ಕ್ರಯ ಪತ್ರ ದಿಃ30.12.2016 ರ ಮೂಲ ದಾಖಲೆ ನೋಡಿ ಗುರುತಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿರುವ ತನ್ನಮತ್ತು ಪ್ರತಿವಾದಿಯ ಸಹಿಗಳನ್ನು ನೋಡಿ ಗುರುತಿಸಿದ್ದು ಕ್ರಮವಾಗಿ ನಿಪಿ-1(ಎ) ಮತ್ತು ನಿಪಿ-1 (ಬಿ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಸಾಕ್ಷಿದಾರರಾಗಿ ನಾಗರಾಜಾಚಾರ್ ಮತ್ತು ನಾಗರಾಜ್ ಸಹಿ ಮಾಡಿದ್ದು ಸಾಕ್ಷಿ ಎರಡು ಸಹಿ ನೋಡಿ ಗುರುಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1(ಸಿ) ಮತ್ತು ನಿಪಿ-1(ಡಿ) ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ ಡಿ ಸಿ ಬಿ ನಕಲು ನೋಡುತ್ತಿದ್ದು ನಿಪಿ-2 ಎಂದು, ಇಸಿ ದಾಖಲೆಯನ್ನು ನೋಡುತ್ತಿದ್ದು ನಿಪಿ-3 ಎಂದು, ನೋಟೀಸ್ ನ ಕಛೇರಿ ಪ್ರತಿಯನ್ನು ನೋಡುತ್ತಿದ್ದು ನಿಪಿ-4 ಎಂದು, ಅಂಚೆ ರಸೀದಿ ಮತ್ತು ಅಂಚೆ ಸ್ವೀಕೃತಿ ನೋಡುತ್ತಿದ್ದು ಕ್ರಮವಾಗಿ ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

**ಶ್ರೀ ಎಂ ಎಸ್ ಬಿ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಮುಂದೂಡಲಾಯಿತು.**

ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಹಿರಿಯೂರು.